# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2019-20ನೇ ಸಾಲಿನ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯ ಕ್ರಿಯಾ ಯೋಜನೆ ಕುರಿತು.

**ಓದಲಾಗಿದೆ:-**
1) ಸರ್ಕಾರದ ಆದೇಶ ಸಂಖ್ಯೆ: ಕಾಇ 269 ಎಲ್‌ಇಟಿ 2016, ದಿನಾಂಕ: 13/10/2016.
2) ಸರ್ಕಾರದ ಆದೇಶ ಸಂಖ್ಯೆ: ಕಾಇ 267 ಎಲ್‌ಇಟಿ 2017, ದಿನಾಂಕ: 23/08/2017.
3) ಸರ್ಕಾರದ ಆದೇಶ ಸಂಖ್ಯೆ: ಕಾಇ 65 ಎಲ್‌ಇಟಿ 2018 (ಭಾಗ-3) ದಿನಾಂಕ: 14/09/2018
4) ಸರ್ಕಾರದ ಆದೇಶ ಸಂಖ್ಯೆ: ಕಾಇ 467 ಎಲ್‌ಇಟಿ 2017, ದಿನಾಂಕ: 24/09/2018
5) ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಪತ್ರ ಸಂಖ್ಯೆ: ಅಸಂಕಾ/ಅ.ಪ.ಯೋ/ಸಿ.ಆರ್-02/2017-18, ದಿನಾಂಕ: 27/05/2019

@@@@@

**ಪ್ರಸ್ತಾವನೆ:-**

ಕರ್ನಾಟಕ ರಾಜ್ಯ ಸರ್ಕಾರವು 2011-12ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ ಎನ್ನುವ ವಿಮಾ ಯೋಜನೆಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅನುಷ್ಠಾನಗೊಳಿಸುತ್ತಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ 2016-17ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಊರ್ಜಿತ ಚಾಲನಾ ಪರವಾನಗಿ ಪಡೆದ ಖಾಸಗಿ ವಾಣಿಜ್ಯ ವಾಹನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಚಾಲಕರಿಗೆ, ನಿರ್ವಾಹಕರಿಗೆ ಹಾಗೂ ಕ್ಲೀನರ್‌ಗಳಿಗೆ ಅನ್ವಯಿಸುವಂತೆ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ"** ಎನ್ನುವ ಶೀರ್ಷಿಕೆಯ ಬದಲಾಗಿ ***"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"*** ಎಂದು ರೂ.29.00ಕೋಟಿಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

---2

ಮುಂದುವರೆದು, ಕರ್ನಾಟಕ ರಾಜ್ಯದಲ್ಲಿ ಊರ್ಜಿತ ಚಾಲನಾ ಪರವಾನಗಿ ಪಡೆದ ಖಾಸಗಿ ವಾಣಿಜ್ಯ ವಾಹನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ವಿಮಾ ಪರಿಹಾರ ಸೌಲಭ್ಯದಡಿ ಫಲಾನುಭವಿಯು ಗರಿಷ್ಠ ರೂ.2.00ಲಕ್ಷಗಳ ಪರಿಹಾರ ಪಡೆಯಲು ಅರ್ಹನಾಗಿರುತ್ತಾನೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಅಪಘಾತದಿಂದ ನಿಧನರಾದ ಫಲಾನುಭವಿಗಳಿಗೆ ಸದರಿ ಪರಿಹಾರದ ಮೊತ್ತವನ್ನು ರೂ.2.00 ಲಕ್ಷದಿಂದ ರೂ.5.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಈ ಯೋಜನೆಯಡಿ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿ ನೀಡಿ, ಅಪಘಾತಕ್ಕೊಳಗಾದ ಗಾಯಾಳುಗಳ ಪ್ರಾಣ ರಕ್ಷಣೆ ಮಾಡುವ ಅಪಘಾತ ಜೀವರಕ್ಷಕ ಸ್ವಯಂಸೇವಕರನ್ನು ಸಜ್ಜುಗೊಳಿಸುವ ಕಾರ್ಯವನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ನಿರ್ವಹಿಸುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಆದೇಶದಲ್ಲಿ ಖಾಸಗಿ ವಾಣಿಜ್ಯ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ನೀಡಲು ಹಾಗೂ ನಿರ್ವಾಹಕರು ಮತ್ತು ಕ್ಲೀನರ್‌ಗಳನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲು ನಿರ್ಣಯ ಕೈಗೊಂಡಿದೆ ಹಾಗೂ ಅಪಘಾತದಲ್ಲಿ ಮರಣ ಹೊಂದಿದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಚಾಲಕರ ಮಕ್ಕಳ ವಿದ್ಯಾಭ್ಯಾಸ ಸ್ಥಗಿತಗೊಳ್ಳದಂತೆ ತಡೆಹಿಡಿಯಲು ಹಾಗೂ ಮುಂದುವರೆಸಲು ಉತ್ತೇಜಿಸುವ ಉದ್ದೇಶದಿಂದ ಅಂತಹ ಚಾಲಕರ ಇಬ್ಬರು ಮಕ್ಕಳಿಗೆ 1 ನೇ ತರಗತಿಯಿಂದ ಪದವಿಪೂರ್ವ / 12ನೇ ತರಗತಿಯವರೆಗೆ ವ್ಯಾಸಂಗ ಮಾಡಲು ವಾರ್ಷಿಕ ಶೈಕ್ಷಣಿಕ ಧನಸಹಾಯ ನೀಡಲು ನಿರ್ಣಯಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸರ್ಕಾರದ ಆದೇಶದಲ್ಲಿ ಅಸಂಘಟಿತ ಕಾರ್ಮಿಕ ವಲಯದಲ್ಲಿ ಗುರುತರ ಸೇವೆ ಸಲ್ಲಿಸಿದ ಕಾರ್ಮಿಕರನ್ನು ಗುರುತಿಸಿ, ಸನ್ಮಾನಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಸಾರಿಗೆ ಕಾರ್ಮಿಕರು ಸೇರಿದಂತೆ ಒಟ್ಟು 5 ವಲಯದ ಅಸಂಘಟಿತ ಕಾರ್ಮಿಕರಿಗೆ ಪ್ರತಿ ವರ್ಷ ಮಾರ್ಚ್ 1 ರಂದು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಕಾರ್ಮಿಕ ಸಮ್ಮಾನ ದಿನ ಆಚರಿಸಿ, ಕಾರ್ಮಿಕರ ಸಮ್ಮಾನ ಪ್ರಶಸ್ತಿ ಹಾಗೂ ವಿಶೇಷ ಪುರಸ್ಕಾರ ನೀಡಿ ಗೌರವಿಸಲು ಆದೇಶ ಹೊರಡಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಪ್ರಸ್ತಾವನೆಯಲ್ಲಿ 2019–20ನೇ ಸಾಲಿನಲ್ಲಿ, ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯ ಲೆಕ್ಕಶೀರ್ಷಿಕೆ 2230–01–103–7–03ರಡಿ ನಿಗಧಿಪಡಿಸಲಾದ ರೂ.666.00 ಲಕ್ಷಗಳ ಆಯವ್ಯಯದಲ್ಲಿ, ಮಂಡಳಿಯಲ್ಲಿ ಜಾರಿಯಲ್ಲಿರುವ ಯೋಜನೆಗಳಿಗೆ ಸದರಿ ಅನುದಾನವನ್ನು ಸೂಕ್ತ ರೀತಿಯಲ್ಲಿ ಸದುಪಯೋಗಪಡಿಸಿಕೊಳ್ಳುವ ಕುರಿತು ಕರಡು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸರ್ಕಾರದ ಅನುಮೋದನೆಯನ್ನು ಕೋರಿರುತ್ತಾರೆ.

ಜಂಟಿ ಕಾರ್ಯದರ್ಶಿ, ಕರ್ನಾಟಕ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 455 ಎಲ್ಇಟಿ 2018,**
**ಬೆಂಗಳೂರು ದಿನಾಂಕ: 28.06.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯ ಲೆಕ್ಕಶೀರ್ಷಿಕೆ 2230-01-103-7-03ರಡಿ ರೂ.666.00 ಲಕ್ಷಗಳ ಆಯವ್ಯಯ ನಿಗಧಿಪಡಿಸಲಾಗಿದ್ದು, ಸದರಿ ಅನುದಾನವನ್ನು ಈ ಕೆಳಕಂಡ ಕ್ರಿಯಾ ಯೋಜನೆಗೆ ಬಳಸಿಕೊಳ್ಳಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

(ರೂ. ಲಕ್ಷಗಳಲ್ಲಿ)

| ಕ್ರಸಂ | ಉದ್ದೇಶ | ಒಟ್ಟು ಮೊತ್ತ | ಒಟ್ಟು ಮೊತ್ತದ ವಿಂಗಡಣೆ | ಅಂದಾಜು ಫಲಾನುಭವಿಗಳ ಸಂಖ್ಯೆ | ದರ | ಒಟ್ಟು ಮೊತ್ತ |
|---|---|---|---|---|---|---|
| 1. | ಮಂಡಳಿಯಿಂದ ನೇರವಾಗಿ ಅಪಘಾತ ಪರಿಹಾರ ಯೋಜನೆ. ಮರಣ ಪ್ರಕರಣಗಳಲ್ಲಿ - ರೂ.5 ಲಕ್ಷ, ಶಾಶ್ವತ ದುರ್ಬಲತೆ - ರೂ.2 ಲಕ್ಷ, ತಾತ್ಕಾಲಿಕ ದುರ್ಬಲತೆ ಮತ್ತು ಆಸ್ಪತ್ರೆ ವೆಚ್ಚ - ರೂ.1 ಲಕ್ಷದವರೆಗೆ | 570 | ಮರಣ ಪ್ರಕರಣದಲ್ಲಿ ನೀಡಬಹುದಾದ ಪರಿಹಾರ | 98 | 5 | 490 |
| | | | ಶಾಶ್ವತ ದುರ್ಬಲತೆ | 10 | 2 | 20 |
| | | | ತಾತ್ಕಾಲಿಕ ದುರ್ಬಲತೆ ಮತ್ತು ಆಸ್ಪತ್ರೆ ವೆಚ್ಚ | 60 | 1 | 60 |
| 2. | ಅಪಘಾತದಲ್ಲಿ ನಿಧನ ಹೊಂದಿದ ಅಥವಾ ಸಂಪೂರ್ಣ ದುರ್ಬಲತೆ ಹೊಂದಿದ ಚಾಲಕರ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿ ಪೂರ್ವ/ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಾರ್ಷಿಕ ಶೈಕ್ಷಣಿಕ ಧನ ಸಹಾಯ | 25 | ಅಪಘಾತದಲ್ಲಿ ನಿಧನ ಹೊಂದಿದ ಅಥವಾ ಸಂಪೂರ್ಣ ನಿಧನ ಹೊಂದಿದ ಚಾಲಕರ, ನಿರ್ವಾಹಕರ ಹಾಗೂ ಕ್ಲೀನರ್‌ಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿ ಪೂರ್ವ/ 12ನೇ ತರಗತಿಯವರೆಗೆ ವಾರ್ಷಿಕ ರೂ. 10,000/-ರಂತೆ ಶೈಕ್ಷಣಿಕ ಧನ ಸಹಾಯ. | 250 | 0.1 | 25 |
| 3. | ಚಾಲಕರಿಗೆ ಶ್ರಮ ಸಮ್ಮಾನ ಹಾಗೂ ವಿಶೇಷ ಪುರಸ್ಕಾರ ಪ್ರಶಸ್ತಿ | 31.32 | ಪ್ರತಿ ಜಿಲ್ಲೆಯಲ್ಲಿ ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ 4 ಚಕ್ರಗಳ ವಾಹನ ಚಾಲಕರಿಗೆ ತಲಾ ರೂ. 10.000/-ರಂತೆ ಶ್ರಮ ಸಮ್ಮಾನ ಪ್ರಶಸ್ತಿ | 30 | 0.1 | 3 |
| | | | ಪ್ರತಿ ಜಿಲ್ಲೆಯಲ್ಲಿ ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ 3 ಚಕ್ರಗಳ ವಾಹನ ಚಾಲಕರಿಗೆ ತಲಾ ರೂ. 10.000/-ರಂತೆ ಶ್ರಮ ಸಮ್ಮಾನ ಪ್ರಶಸ್ತಿ | 30 | 0.1 | 3 |

| | | | | | | |
|---|---|---|---|---|---|---|
| | | | ಪ್ರತಿ ಜಿಲ್ಲೆಯಲ್ಲಿ ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ 04 ಚಕ್ರ ವಾಹನಗಳ 05 ವಾಹನ ಚಾಲಕರಿಗೆ ತಲಾ ರೂ. 1,000/-ರಂತೆ ವಿಶೇಷ ಪುರಸ್ಕಾರ | 150 | 0.01 | 1.5 |
| | | | ಪ್ರತಿ ಜಿಲ್ಲೆಯಲ್ಲಿ ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿ ತ್ರಿಚಕ್ರ ವಾಹನಗಳ 05 ವಾಹನ ಚಾಲಕರಿಗೆ ತಲಾ ರೂ. 1,000/- ರಂತೆ ವಿಶೇಷ ಪುರಸ್ಕಾರ | 150 | 0.01 | 1.5 |
| | | | 62 ಚಾಲಕರಿಗೆ (ತಲಾ 31 ರಂತೆ 04 ಚಕ್ರಗಳ ಹಾಗೂ ತ್ರಿಚಕ್ರಗಳ ವಾಹನ) ರೂ.1,000/-ಗಳಲ್ಲಿ ಸ್ಮರಣಿಕೆ ಹಾಗೂ ಪ್ರಮಾಣ ಪತ್ರ | 1860 | 0.01 | 18.60 |
| | | | ಕಾರ್ಮಿಕ ಬಂಧು ಕಮೀಷನ್ (ಪ್ರತಿ ಪ್ರಶಸ್ತಿಗೆ ರೂ.200/-ರಂತೆ) | 1860 | 0.002 | 3.72 |
| 4. | ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಯೋಜನೆಗಳ ಜಾರಿಗಾಗಿ ಆಡಳಿತಾತ್ಮಕ ಹಾಗೂ ಕಾರ್ಯಾಚರಣೆ ವೆಚ್ಚಗಳು | 39.68 | ಸಂವಹನ ಚಟುವಟಿಕೆಗಳಾದ ಮಾಧ್ಯಮಗಳಲ್ಲಿ ಜಾಹೀರಾತು, ಕರಪತ್ರ, ಮುದ್ರಣ, ಬ್ಯಾನರ್‌ಗಳು ಇತ್ಯಾದಿಗಳ ವೆಚ್ಚ, ತಾಂತ್ರಿಕ ಅಭಿವೃದ್ಧಿ ಹಾಗೂ ಇತರ ಆಡಳಿತಾತ್ಮಕ ವೆಚ್ಚ. | | | 39.68 |
| | | 666 | | | | 666 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
28.06.2019
(ಎಲ್.ಎಸ್. ಶ್ರೀಕಂಠಬಾಬು)
ಸರ್ಕಾರದ ಉಪ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.
28.6.2019

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕಪತ್ರ/ ಲೆಕ್ಕಪರಿಶೋಧನೆ, ಕರ್ನಾಟಕ, ಬೆಂಗಳೂರು.
2. ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬೆಂಗಳೂರು.
3. ಜಂಟಿ ಕಾರ್ಯದರ್ಶಿಯವರು, ಕರ್ನಾಟಕ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಕಾರ್ಮಿಕ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9).
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.